ಅಧ್ಯಕ್ಷರು: ★ ವಿಧೇಯಕವನ್ನು ಮಂಡಿಸಲಾಗಿದೆ. ★

ಈ) ಕರ್ನಾಟಕ ಧನ ವಿನಿಯೋಗ (ನಂ.6) ವಿಧೇಯಕ, 1997. ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನ ವಿನಿಯೋಗ (ನಂ.6) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''1997ರ ಕರ್ನಾಟಕ ಧನ ವಿನಿಯೋಗ (ನಂ.6) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನ ವಿನಿಯೋಗ (ನಂ.6) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ★ವಿಧೇಯಕವನ್ನು ಮಂಡಿಸಲಾಗಿದೆ. ★

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕ 1997 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಸಿದ್ಧರಾಮಯ್ಯ: ಮಾನ್ಯ ಅಧ್ಯಕ್ಷರೆ, ಈಗಾಗಲೇ ನಾಲ್ಕು ವಿಧೇಯಕಗಳಲ್ಲಿ ಒಂದು ಪೂರಕ ಅಂದಾಜುಗಳಿಗೆ ಸಂಬಂಧಿಸಿದ್ದು,ಇನ್ನೊಂದು 1997-98ರ ಆಯವ್ಯಯಕ್ಕೆ ಸಂಬಂಧಿಸಿದ್ದು ಸುಮಾರು ಹದಿನೈದು ಸಾವಿರದ ನೂರ ಎಪ್ಪತ್ತೆರಡು

★ ಅನುಬಂಧ III & IV

ಕೋಟಿ ಮೂವತ್ತೆರಡು ಲಕ್ಷ ರೂಪಾಯಿಗಳಿಗೆ ಮಂಜೂರಾತಿಯನ್ನು ಕೊಡಬೇಕೆಂದಿದೆ. ಇನ್ನು ಎರಡು ವಿಧೇಯಕಗಳು 1987-88ರಲ್ಲಿ ನೂರ ಮೂವತ್ತು ಕೋಟಿ ರೂಪಾಯಿಗಳ ಎಕ್ಸೆಸ್ ಅಮೌಂಟ್ ಖರ್ಚು ಆಗಿರತಕ್ಕಂಥದ್ದು, 1988-89ರಲ್ಲಿ ಮೂವತ್ತಾರು ಕೋಟಿ ರೂಪಾಯಿಗಳು ಖರ್ಚು ಆಗಿರುವಂಥಾದ್ದರ ಬಗ್ಗೆ ಈಗಾಗಲೇ ಚರ್ಚೆಯಾಗಿದೆ. ನಾನು ಆರು ತಿಂಗಳು ಖರ್ಚು ಮಾಡುವುದಕ್ಕೆ ಓಟ್ ಆನ್ ಅಕೌಂಟ್ ತೆಗೆದುಕೊಂಡಿದ್ದೆ. ಇನ್ನು ಉಳಿದದ್ದು ಇಡೀ ವರ್ಷಕ್ಕೆ ಮಂಜೂರಾತಿಯನ್ನು ಕೊಡಬೇಕೆಂದು ಸಭೆಯನ್ನು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''1997ರ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಪರ್ಯಾಲೋಚಿಸುವುದು''

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು: ''ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಅಂಗೀಕರಿಸಬೇಕೆಂದು

ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''1997ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ಆ) ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕ, 1997 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಸಿದ್ಧರಾಮಯ್ಯ: ಮಾನ್ಯ ಅಧ್ಯಕ್ಷರೆ, ಇದರ ಬಗ್ಗೆ ನಾನು ಈಗಾಗಲೇ ಹೇಳಿದ್ದೇನೆ. ಇದನ್ನು ಅಂಗೀಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ

''1997ರ ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕವನ್ನು ಪರ್ಯಾಲೋಚಿಸುವದು''

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು: ''ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ಮತ್ತು 3 ಎರಡನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ